## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1155 |
| ಸದಸ್ಯರ ಹೆಸರು | : | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15-12-2023. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಧಾರವಾಡ ಸೆಂಟ್ರಲ್ ವಿಧಾನ ಕ್ಷೇತ್ರದ ವ್ಯಾಪ್ತಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಅಂಗನವಾಡಿಗಳ ಸಂಖ್ಯೆ ಎಷ್ಟು; | ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 94 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ. | ಧಾರವಾಡ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ; | ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 51 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. |
| ಇ. | ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2023-24 ನೇ ಸಾಲಿನಲ್ಲಿ ಪೂರಕ ಅಂದಾಜು ಯೋಜನೆಯಡಿ 1 ಅಂಗನವಾಡಿ ಕಟ್ಟಡ ಮಂಜೂರಾಗಿದೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಳಕಂಡ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಶಾಲಾ ಆವರಣದಲ್ಲಿ ನಿರಾಕ್ಷೇಪಣ ಪತ್ರ ಪಡೆಯಲಾಗಿದ್ದು ಅನುದಾನ ಲಭ್ಯತೆ ಅನುಸಾರ ಅಂಗನವಾಡಿ ಕಟ್ಟಡ ನಿರ್ಮಿಸಲಾಗುವುದು. |

| ಕ್ರ. ಸಂ | ವಿಧಾನ ಸಭಾ ಕ್ಷೇತ್ರ ಸಂಖ್ಯೆ | ಅಂಗನವಾಡಿ ಕೇಂದ್ರದ ಹೆಸರು | NOC/ಉತಾರ ಇರುವದು/ ಶಿಥಿಲಗೊಂಡಿದೆ |
|---|---|---|---|
| 1 | 73 | ಶಿರಡಿನಗರ | NOC ಹಾಗೂ ಉತಾರ |
| 2 | 73 | ಪತ್ರಕರ್ತ ನಗರ | NOC ಹಾಗೂ ಉತಾರ |
| 3 | 73 | ಸಿದ್ದೇಶ್ವರ ಆಶ್ರಯ ಕಾಲೋನಿ | NOC ಹಾಗೂ ಉತಾರ |
| 4 | 73 | ಮುಸ್ಲಿಂ ಓಣಿ | NOC ಹಾಗೂ ಉತಾರ |
| 5 | 73 | ಸಾಯಿನಗರ | NOC ಹಾಗೂ ಉತಾರ |

ಬಾಕಿಯಿರುವ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಅನುದಾನ ಮತ್ತು ನಿವೇಶನ ಲಭ್ಯತೆ ಮೇರೆಗೆ ಸ್ವಂತ ಕಟ್ಟಡಗಳನ್ನು ಹಂತ ಹಂತವಾಗಿ ನಿರ್ಮಿಸಲಾಗುವುದು.

**ಸಂಖ್ಯೆ: ಮಮಇ 247 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.